# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5ಜಿ)ಪಿಆರ್/67 /2019–20

ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 15/7/19

## ಸುತ್ತೋಲೆ

ವಿಷಯ: ಪರೀಕ್ಷಾರ್ಥ ಸೇವಾವಧಿಯನ್ನು ಘೋಷಿಸಿಕೊಳ್ಳದೇ ಇರುವ ನಾಲ್ಕನೇ ದರ್ಜೆ ನೌಕರರುಗಳ ವಿವರಗಳ ಸಲ್ಲಿಸುವ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿವಿಧ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಾಲ್ಕನೇ ದರ್ಜೆ ನೌಕರರುಗಳ {ಪೌರಕಾರ್ಮಿಕರು, ಗ್ಯಾಂಗ್‌ಮೆನ್, ಜವಾನರು ಮತ್ತು ಇನ್ನಿತರೇ ಗ್ರೂಪ್ ಡಿ} ಪೈಕಿ ಹಲವಾರು ಮಂದಿ ನಾಲ್ಕನೇ ದರ್ಜೆ ನೌಕರರುಗಳು 2 ವರ್ಷಗಳಿಗೂ ಹೆಚ್ಚಿನ ಸೇವೆಯನ್ನು ಪೂರ್ಣಗೊಳಿಸಿದ್ದರೂ ಸಹ ಪರೀಕ್ಷಾರ್ಥ ಸೇವಾವಧಿಯನ್ನು ಘೋಷಿಸಿಕೊಳ್ಳದೇ ಇರುವುದು ಕಂಡು ಬಂದಿರುತ್ತದೆ. ಆದರೆ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 25 ಸೆನೆವಿ 2004, ದಿ: 15–03–2004ರಲ್ಲಿ ನಾಲ್ಕನೇ ದರ್ಜೆ ನೌಕರರುಗಳಿಗೆ ಪರೀಕ್ಷಾರ್ಥ ಸೇವಾವಧಿಯನ್ನು ಘೋಷಿಸಲು ಕಡ್ಡಾಯಗೊಳಿಸಲಾಗಿರುತ್ತದೆ. ಆದುದ್ದರಿಂದ, 2 ವರ್ಷಗಳಿಗೂ ಹೆಚ್ಚಿನ ಸೇವೆಯನ್ನು ಪೂರ್ಣಗೊಳಿಸಿದ್ದರೂ ಸಹ ಪರೀಕ್ಷಾರ್ಥ ಸೇವಾವಧಿಯನ್ನು ಘೋಷಿಸಿಕೊಳ್ಳದಿರುವ ಎಲ್ಲಾ ನಾಲ್ಕನೇ ದರ್ಜೆ ನೌಕರರುಗಳ ವಿವರಗಳನ್ನು ಇದರೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಭರ್ತಿ ಮಾಡಿ, ಸಂಬಂಧಪಟ್ಟ ನೌಕರರ ಸೇವಾ ಪುಸ್ತಕದೊಂದಿಗೆ ನೌಕರರ ಸೇವಾ ತೃಪ್ತಿಕರವಾಗಿದೆಯೇ / ಇಲ್ಲವೇ, ಸದರಿ ನೌಕರರು ಅನಧಿಕೃತ ಗೈರು ಹಾಜರಿಯಾಗಿರುತ್ತಾರೆಯೇ / ಇಲ್ಲವೇ, ಸದರಿ ನೌಕರರ ಇಲಾಖಾ ವಿಚಾರಣೆ ಇದೆಯೇ / ಇಲ್ಲವೇ ಎಂಬ ಮಾಹಿತಿಗಳನ್ನು ಒಳಗೊಂಡಂತೆ ಸ್ಪಷ್ಟವಾದ ಪ್ರಸ್ತಾವನೆಯನ್ನು ದಿನಾಂಕ: 20–07–2019 ರೊಳಗಾಗಿ ಈ ಕಛೇರಿಗೆ ಸಲ್ಲಿಸಲು ಈ ಸುತ್ತೋಲೆ ಮೂಲಕ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಸೂಚಿಸಿದೆ. ತಪ್ಪಿದ್ದಲ್ಲಿ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳನ್ನೇ ನೇರ ಜವಾಬ್ದಾರರನ್ನಾಗಿ ಮಾಡಲಾಗುವುದು.

ಮಾನ್ಯ ಆಯುಕ್ತರವರ ಆದೇಶದಂತೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಆಯುಕ್ತರು/ವಿಶೇಷ ಆಯುಕ್ತರು (ಯೋಜನೆ/ಹಣಕಾಸು/ಕಲ್ಯಾಣ/ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.

: ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ, ಎಲ್ಲಾ ಸ್ಥಾಯಿ ಸಮಿತಿಯ ಅಧ್ಯಕ್ಷರುಗಳಿಗೆ, ಆಡಳಿತ ಪಕ್ಷದ ನಾಯಕರು, ವಿರೋಧ ಪಕ್ಷದ ನಾಯಕರುಗಳಿಗೆ ಕಳುಹಿಸಿಕೊಡಲು ಕೋರಿದೆ.

: ಎಲ್ಲಾ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.

: ಎಲ್ಲಾ ಇಲಾಖಾ ಮುಖ್ಯಸ್ಥರು / ಬಟವಾಟಿ ಅಧಿಕಾರಿಗಳಿಗೆ ಕಳುಹಿಸಿದೆ.

: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ, ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.

: ಕಛೇರಿ ಪ್ರತಿ.

# ನಮೂನೆ

| ಕ್ರ.ಸಂ | ನೌಕರರ ಹೆಸರು | ಹುದ್ದೆ | ನೇಮಕಾತಿಯಾದ ಕಛೇರಿ | ನೇಮಕಾತಿ ಹೊಂದಿದ ದಿನಾಂಕ | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕಛೇರಿ | ಎರಡು ವರ್ಷದ ಅವಧಿ ಪೂರೈಸಿದ ದಿನಾಂಕ | ಈ ಅವಧಿಯಲ್ಲಿ ಗೈರು ಹಾಜರಿಯಾದ ದಿನಾಂಕ | ಗೈರು ಹಾಜರಿ ಅವಧಿಗೆ ಕೈಗೊಂಡ ಕ್ರಮ | ಪರೀಕ್ಷಾರ್ಥ ಸೇವಾ ಘೋಷಿಸಲು ಸದರಿಯವರು ಅರ್ಹರಿರುವ ಬಗ್ಗೆ ದೃಢೀಕರಣ | ಪರೀಕ್ಷಾರ್ಥ ಅವಧಿ ಘೋಷಿಸಬೇಕಾದ ದಿನಾಂಕ | ಷರಾ |
|---|---|---|---|---|---|---|---|---|---|---|---|
| 1 | | | | | | | | | | | |
| 2 | | | | | | | | | | | |
| 3 | | | | | | | | | | | |
| 4 | | | | | | | | | | | |
| 5 | | | | | | | | | | | |
| 6 | | | | | | | | | | | |
| 7 | | | | | | | | | | | |
| 8 | | | | | | | | | | | |
| 9 | | | | | | | | | | | |
| 10 | | | | | | | | | | | |